# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1354(1512)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಪ್ರಸನ್ನ ಕುಮಾರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ರಾಜ್ಯದಲ್ಲಿ ಬಡವರು, ವಿಧವೆ, ಮಹಿಳೆಯರು ಮತ್ತು ಹಿರಿಯ ನಾಗರಿಕರಿಗೆ ಸರ್ಕಾರದಲ್ಲಿ ಚಾಲ್ತಿಯಲ್ಲಿರುವ ಸಾಮಾಜಿಕ ಭದ್ರತೆ ಮತ್ತು ಪಿಂಚಣಿಯ ಯೋಜನೆಗಳ ಬಗ್ಗೆ

(ಅ) ರಾಜ್ಯದಲ್ಲಿ ಬಡವರು, ಮಹಿಳೆಯರು ಮತ್ತು ಹಿರಿಯ ನಾಗರಿಕರಿಗೆ ಸರ್ಕಾರದಲ್ಲಿ ಚಾಲ್ತಿಯಲ್ಲಿರುವ ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ಯೋಜನೆಗಳು ಯಾವುವು;

(ಆ) ಕಳೆದ ಮೂರು ವರ್ಷದಲ್ಲಿ ಈ ಯೋಜನೆಗಳ ನೆರವು ಕೋರಿ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇದರಲ್ಲಿ ಎಷ್ಟು ಅರ್ಜಿಗಳು ಇತ್ಯರ್ಥವಾಗಿವೆ; ಎಷ್ಟು ಅರ್ಜಿಗಳು ಬಾಕಿ ಉಳಿದಿವೆ;

(ಇ) ಈ ಯೋಜನೆಗಳಿಗೆ ಸಕಾಲದಲ್ಲಿ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಕಾಲದಲ್ಲಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?